ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
**Bangalore Development Authority**

ಸಂಖ್ಯೆ : ಬೆಂಅಪ್ರಾ/ನಮ/ಅಸ/ಅಅ-2/ತಾಸ-3/ಉ/ 03 /2026-27
No.

ದಿನಾಂಕ : 24.04.2026
Date :

ಆಯುಕ್ತರವರ ಕಛೇರಿ,
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ,
ಬೆಂಗಳೂರು.

ಬೆಂಗಳೂರು
ಅನುಸೂಚಿ–ಎ 5
(ಉಪವಿಧಿ ಸಂಖ್ಯೆ: 4.1)

# ನಕ್ಷೆ ಮಂಜೂರಾತಿ ಪತ್ರ

**ಇವರಿಗೆ,**

M/s Concorde Housing Corporation Pvt Ltd.,
#40/1, Vittal malya road, Shanthala nagar,
Bengaluru – 560 001.

**ಮಾನ್ಯರೇ,**

ಬೆಂಗಳೂರು ಪೂರ್ವ ತಾಲ್ಲೂಕು, ಬಿದರಹಳ್ಳಿ ಹೋಬಳಿ, ಕಣ್ಣೂರು ಗ್ರಾಮದ ಸರ್ವೆ ನಂ. 108/1 ರಲ್ಲಿ 1ಎ-24ಗುಂ, ಸರ್ವೆ ನಂ. 108/2 ರಲ್ಲಿ 0ಎ-29ಗುಂ, ಸರ್ವೆ ನಂ. 108/3 ರಲ್ಲಿ 0ಎ-19ಗುಂ ಮತ್ತು ಸರ್ವೆ ನಂ. 110/2 ರಲ್ಲಿ 0ಎ-08ಗುಂ, ಒಟ್ಟು 03ಎ-00ಗುಂ ವಿಸ್ತೀರ್ಣದ ಜಮೀನುಗಳಲ್ಲಿ ನಿರ್ಮಿಸಲು ಉದ್ದೇಶಿಸಿರುವ 2BF+GF+28UF+TF ಅಂತಸ್ತುವುಳ್ಳ ಒಟ್ಟು 260 ವಸತಿ ಘಟಕಗಳ್ನೊಳಗೊಂಡ ಬಹುಮಹಡಿ ವಸತಿ ಸಮುಚ್ಚಯ ಕಟ್ಟಡಗಳ ನಕ್ಷೆಗೆ ನಕ್ಷೆ ಮಂಜೂರಾತಿ ನೀಡಲು ಕೋರಿರುತ್ತೀರಿ.

ಈ ಸಂಬಂಧ ಮಾನ್ಯ ಅಭಿಯಂತರ ಸದಸ್ಯರವರು ಆದೇಶ ಸಂಖ್ಯೆ: 109, ದಿನಾಂಕ: 23.04.2026 ರಂದು ನಕ್ಷೆ ಮಂಜೂರಾತಿಗೆ ಅನುಮೋದನೆ ನೀಡಿದ್ದು, ಅದರಂತೆ ಚಲನ್ ನಂ. GN2604690, ದಿನಾಂಕ: 24.04.2026 ರಂದು ಒಟ್ಟು ರೂ. 1,66,68,815.00/- ಗಳನ್ನು ಪ್ರಾಧಿಕಾರಕ್ಕೆ ಪಾವತಿಸಿರುತ್ತೀರಿ. ಆದ್ದರಿಂದ, ಈ ಕೆಳಕಂಡ ಷರತ್ತುಗಳನ್ನು ವಿಧಿಸಿ ನಕ್ಷೆ ಮಂಜೂರಾತಿ ನೀಡಲಾಗಿದ್ದು, ಸದರಿ ಮಂಜೂರಾತಿ ಅವಧಿಯು ದಿನಾಂಕ: 24.04.2026 ರಿಂದ 23.04.2028 ವರೆಗೆ ಎರಡು ವರ್ಷಗಳ ಅವಧಿಗೆ ಮಾತ್ರ ಮಾನ್ಯತೆ ಪಡೆದಿರುತ್ತದೆ ಎಂದು ಈ ಮೂಲಕ ತಿಳಿಯಪಡಿಸಿದೆ.

## ಪಾಲಿಸಬೇಕಾದ ಷರತ್ತುಗಳು

1) ಪ್ರಾಧಿಕಾರದ ನಗರ ಯೋಜನಾ ವಿಭಾಗದಿಂದ ಅನುಮೋದಿಸಿರುವ ವಸತಿ ಉದ್ದೇಶದ ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನೆ ಆದೇಶ ಪತ್ರ ಸಂಖ್ಯೆ: ಬೆಂಅಪ್ರಾ/ನಯೋಸ/DLP-75/25-26/281/2026-27, ದಿನಾಂಕ: 18.04.2026ರಲ್ಲಿ ವಿಧಿಸಿರುವ ಎಲ್ಲಾ ಷರತ್ತುಗಳನ್ನು ಕಟ್ಟು ನಿಟ್ಟಾಗಿ ಪಾಲಿಸತಕ್ಕದ್ದು.
2) ಮಾನ್ಯ ಸರ್ವೋಚ್ಛ ನ್ಯಾಯಾಲಯದ WP (Civil) No: 14664/2024, ದಿನಾಂಕ: 17.12.2024 ರಲ್ಲಿ ನೀಡಿರುವ ನಿರ್ದೇಶನಗಳನ್ನು ಕಡ್ಡಾಯವಾಗಿ ಪಾಲಿಸುವುದು.
3) ಪ್ರಮಾಣ ಪತ್ರದಲ್ಲಿ ತಿಳಿಸಿರುವಂತೆ, KSPCB ವತಿಯಿಂದ CFE ಪತ್ರ ಮತ್ತು SEIAA ರವರಿಂದ ನಿರಾಕ್ಷೇಪಣಾ ಪತ್ರ ಹಾಗೂ ಅಗ್ನಿಶಾಮಕ ಇಲಾಖೆಯಿಂದ ನಿರಾಕ್ಷೇಪಣಾ ಪತ್ರ ಪಡೆದು ಪ್ರಾರಂಭಿಕ ಪ್ರಮಾಣ ಪತ್ರಕ್ಕೆ ಮನವಿ ಸಲ್ಲಿಸುವ ಸಮಯದಲ್ಲಿ ಪ್ರಾಧಿಕಾರಕ್ಕೆ ಹಸ್ತಾಂತರಿಸುವುದು.
4) ನಕ್ಷೆಯಲ್ಲಿ ವಿವಿಧ ಉದ್ದೇಶಕ್ಕಾಗಿ ಗುರುತಿಸಿರುವ ಪ್ರದೇಶಗಳಲ್ಲಿ ಬೇರೆ ಯಾವುದೇ ಉದ್ದೇಶಕ್ಕಾಗಿ ಉಪಯೋಗಿಸತಕ್ಕದಲ್ಲ.

ಆಯುಕ್ತರ ಪರವಾಗಿ
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು.

ಪು.ತಿ.ನೋ...

ಟಿ. ಚೌಡಯ್ಯ ರಸ್ತೆ, ಕುಮಾರಪಾರ್ಕ್ ಪಶ್ಚಿಮ, ಬೆಂಗಳೂರು – 560 020. ದೂರವಾಣಿ : 080–23443075, 23445005
**T. Chowdaiah Road, Kumarapark West, Bangalore - 560 020, Telephone : 080 - 23443075, 23445005**

PLO No. 166788

ಸಂಖ್ಯೆ :
No.

ದಿನಾಂಕ :
Date :

18) ಅಭಿವೃದ್ಧಿದಾರರು ನಕ್ಷೆ ಅನುಮೋದನೆ ಸಂಬಂಧ ಜಮೀನಿನ ಮಾಲಿಕತ್ವದ ಬಗ್ಗೆ ಯಾವುದೇ ತಪ್ಪು ಮಾಹಿತಿ / ದಾಖಲಾತಿ ನೀಡಿದ್ದಲ್ಲಿ ಅರ್ಜಿದಾರರಿಗೆ ಯಾವುದೇ ಮುನ್ಸೂಚನೆ ನೀಡದೆ ನಕ್ಷೆ ಅನುಮೋದನೆಯು ತನ್ನಿಂತಾನೇ ರದ್ದಾಗುತ್ತದೆ ಹಾಗೂ ಕಾನೂನು ರೀತ್ಯಾ ಸೂಕ್ತ ಕ್ರಮಕೈಗೊಳ್ಳಲಾಗುವುದು.

19) ಅಭಿವೃದ್ಧಿದಾರರು ಕುಡಿಯುವ ನೀರಿನ ಸರಬರಾಜಿಗಾಗಿ ಸಂಬಂಧಪಟ್ಟ ಇಲಾಖೆಯನ್ನು (BWSSB) ಅಥವಾ ಸ್ಥಳೀಯ ಸಂಸ್ಥೆಯನ್ನು ಅವಲಂಭಿಸದೆ ನೀರಿನ ಸರಬರಾಜಿಗಾಗಿ ತಮ್ಮ ಸ್ವಂತ ವ್ಯವಸ್ಥೆಯನ್ನು ಮಾಡಿಕೊಳ್ಳತಕ್ಕದ್ದು.

20) SEIAA ನಿಯಮಗಳನ್ವಯ ಅಭಿವೃದ್ಧಿದಾರರು ವಾಹನ ನಿಲುಗಡೆಯ ಸ್ಥಳದಲ್ಲಿ ಕಡ್ಡಾಯವಾಗಿ ಶೇ 25% ರಷ್ಟು ವಿದ್ಯುತ್ ವಾಹನಗಳಿಗೆ ಚಾರ್ಜಿಂಗ್ ಪಾಯಿಂಟ್ ಗಳನ್ನು ಅಳವಡಿಸತಕ್ಕದ್ದು.

21) FAR ವಿಸ್ತೀರ್ಣದ ಪ್ರತಿ 240 ಮೀ ಗೆ ಒಂದರಂತೆ ಗಿಡವನ್ನು ನೆಟ್ಟು ಪೋಷಿಸುವುದು ಕಡ್ಡಾಯವಾಗಿದೆ.

22) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಅಥವಾ ಯಾವುದೇ ಸಕ್ಷಮ ಪ್ರಾಧಿಕಾರಗಳು ಪ್ರಸ್ತಾಪಿಸಿರುವ ರಸ್ತೆಗಳ ಪಂಕ್ತೀಕರಣಗಳ ಪ್ರಶ್ನಿತ ಜಮೀನುಗಳಲ್ಲಿ ಇದ್ದಲ್ಲಿ ಸಾರ್ವಜನಿಕ ರಸ್ತೆಗಾಗಿ ಜಾಗವನ್ನು ಮುಫತ್ತಾಗಿ ನೊಂದಾಯಿತ ಪರಿತ್ಯಾಜನಾ ಪತ್ರದ ಮೂಲಕ ಹಸ್ತಾಂತರಿಸುವ ಷರತ್ತಿಗೆ ಒಳಪಟ್ಟಿರುತ್ತದೆ.

23) ಪ್ರಶ್ನಿತ ಜಮೀನಿನಲ್ಲಿ RMP- ರಸ್ತೆ / RR / SH / NH ಇತ್ಯಾದಿ ಇದ್ದಲ್ಲಿ ರಸ್ತೆ ಪಂಕ್ತೀಕರಣದಲ್ಲಿ ಬರುವ ಜಮೀನನ್ನು ಪ್ರಾಧಿಕಾರಕ್ಕೆ ನೊಂದಾಯಿತ ಪರಿತ್ಯಾಜನಾ ಪತ್ರದ ಮೂಲಕ ಮುಫತ್ತಾಗಿ ಹಸ್ತಾಂತರಿಸಬೇಕು ಹಾಗೂ ವಿನ್ಯಾಸ ನಕ್ಷೆ ಅನುಮೋದನೆ ಸಂದರ್ಭದಲ್ಲಿ ರಸ್ತೆ ಮಾರ್ಜಿನ್ ಅನ್ನು ಕಡ್ಡಾಯವಾಗಿ ಬಿಡತಕ್ಕದ್ದು.

24) ಅರ್ಜಿದಾರರು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು / ಸರ್ಕಾರವು / ನ್ಯಾಯಾಲಯವು ಕಾಲ ಕಾಲಕ್ಕೆ ವಿಧಿಸುವ ಎಲ್ಲಾ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು.

ಆಯುಕ್ತರ ಪರವಾಗಿ
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು

**ಪ್ರತಿಯನ್ನು:** ಕಾರ್ಯಪಾಲಕ ಅಭಿಯಂತರರು (North), ಬೆಂ.ಅ.ಪ್ರಾ, ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಅನುಮೋದಿತ ನಕ್ಷೆಯಂತೆ ಕಾಮಗಾರಿಯನ್ನು ನಿರ್ವಹಿಸುವ ಬಗ್ಗೆ ಪರಿಶೀಲಿಸಿಕೊಳ್ಳಲು ಹಾಗೂ ಮಾನ್ಯ ಸರ್ವೋಚ್ಛ ನ್ಯಾಯಾಲಯದ WP (Civil) No: 14664/2024 ದಿನಾಂಕ: 17.12.2024 ರಲ್ಲಿ ನೀಡಿರುವ ನಿರ್ದೇಶನಗಳನ್ನು ಪಾಲಿಸುವುದು.